# ಕರ್ನಾಟಕ ಸರ್ಕಾರ
# ಸಮಾಜ ಕಲ್ಯಾಣ ಇಲಾಖೆ
# ಪರೀಕ್ಷಾ ಪೂರ್ವ ತರಬೇತಿ ಕೇಂದ್ರ

ಸಕಇ-ಪಪೂತಕೇ/ಎಸ್-6(ಎಫ್.ಎಸ್)/174/2024(1411009)

ಅಪರ ನಿರ್ದೇಶಕರ ಕಛೇರಿ
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಡಾ|| ಬಿ.ಆರ್.ಅಂಬೇಡ್ಕರ್ ಭವನ
ವಸಂತನಗರ, ಬೆಂಗಳೂರು.
ದಿನಾಂಕ : 03-08-2024

## ಅಧಿಸೂಚನೆ

ವಿಷಯ: 2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಸಬ್ ಇನ್ಸ್ಪೆಕ್ಟರ್ (PSI)/ಪ್ಯಾರ ಮಿಲಿಟರಿ ಪೂರ್ವ-ನೇಮಕಾತಿ ತರಬೇತಿ ನೀಡುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 75 ದಿನಗಳ ವಸತಿಯುತ ತರಬೇತಿ ನೀಡುವ ಬಗ್ಗೆ.

*******

2024-25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ವಸತಿಯುತ, ಸಬ್ ಇನ್ಸ್ಪೆಕ್ಟರ್ (PSI)/ಪ್ಯಾರ ಮಿಲಿಟರಿ ಪೂರ್ವ-ನೇಮಕಾತಿ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ವಸತಿಯುತ, ಸಬ್ ಇನ್ಸ್ಪೆಕ್ಟರ್ (PSI)/ಪ್ಯಾರ ಮಿಲಿಟರಿ ಪೂರ್ವ-ನೇಮಕಾತಿ ತರಬೇತಿಯ ಅವಧಿ, ಶೈಕ್ಷಣಿಕ ವಿದ್ಯಾರ್ಹತೆ, ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| ಕ್ರಸಂ | | ವಿವರ |
|---|---|---|
| 01. | **ಸಬ್ ಇನ್ಸ್ಪೆಕ್ಟರ್ (PSI)/ಪ್ಯಾರ ಮಿಲಿಟರಿ ಪೂರ್ವ-ನೇಮಕಾತಿ ತರಬೇತಿ** | ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ವಸತಿಯುತ, ಸಬ್ ಇನ್ಸ್ಪೆಕ್ಟರ್ (PSI)/ಪ್ಯಾರ ಮಿಲಿಟರಿ ಪೂರ್ವ-ನೇಮಕಾತಿ ತರಬೇತಿ ನೀಡುವ ಸಂಬಂಧ ಕರ್ನಾಟಕ ರಾಜ್ಯದ 04 ಕಂದಾಯ ವಿಭಾಗಗಳಲ್ಲಿ ಪ್ರತ್ಯೇಕವಾಗಿ 75 ದಿನಗಳ ವಸತಿಯುತ ತರಬೇತಿ ನೀಡಲಾಗುವುದು. |
| 02. | **ವಯಸ್ಸು** | ಕನಿಷ್ಠ 21 ವರ್ಷ , ಗರಿಷ್ಠ 32 ವರ್ಷ<br>ಸೇವಾನಿರತವಾಗಿರುವ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷ |
| 03. | **ವಿದ್ಯಾರ್ಹತೆ** | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಯು.ಜಿ.ಸಿ ಇಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ (Degree) ಅಥವಾ ತತ್ಸಮಾನ (ಪಿಯುಸಿ ನಂತರ ಪದವಿಗೆ ಸಮನಾದ ಯಾವುದೇ ವಿದ್ಯಾರ್ಹತೆ) ಶಿಕ್ಷಣ ಪಾಸ್ ಮಾಡಿರಬೇಕು. |
| 04. | **ಸೇವಾನಿರತ ಅಭ್ಯರ್ಥಿಗಳಿಗೆ ಅನುಭವ** | ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ ಕನಿಷ್ಟ 5 ವರ್ಷ ಸೇವೆ ಸಲ್ಲಿಸಿರಬೇಕು. |

| | | |
|---|---|---|
| 05. | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು;<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.<br>3.ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪದವಿಯಲ್ಲಿ ಉತ್ತೀರ್ಣರಾಗಿರಬೇಕು. |
| 06. | **ಎತ್ತರ** | ಪುರುಷರಿಗೆ ಕನಿಷ್ಠ 163 ಸೆಂ.ಮೀ<br>ಮಹಿಳೆಯರಿಗೆ ಕನಿಷ್ಠ 153 ಸೆಂ.ಮೀ |
| 07. | **ತೂಕ** | ಪುರುಷರಿಗೆ ಕನಿಷ್ಠ 50 ಕೆ.ಜಿ<br>ಮಹಿಳೆಯರಿಗೆ ಕನಿಷ್ಠ 45 ಕೆ.ಜಿ |
| 08. | **ಎದೆ (ಪುರುಷರಿಗೆ)** | ಕನಿಷ್ಠ 76 ಸೆಂ.ಮೀ |
| 09. | **ಆಯ್ಕೆ ವಿಧಾನ** | ಪದವಿಯಲ್ಲಿ ಪಡೆದಿರುವ ಅಂಕಗಳ ಆಧಾರದ ಆಯ್ಕೆ ಮಾಡಲಾಗುವುದು. |
| 10. | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | **petc.kar.nic.in** |
| 11. | **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | **31.08.2024** |

**<u>ಗಮನದಲ್ಲಿಡಬೇಕಾದ ಅಂಶ :-</u>**

- ಇಲಾಖಾ ವೆಬ್ ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಹಾಗೂ ಅಂತಿಮವಾಗಿರುತ್ತದೆ.
- ಇಲಾಖಾವತಿಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್ ಸೈಟ್ ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು.
- ತಪ್ಪು ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.

**ಸಹಿ/-**
ಮುಖ್ಯ ಆಡಳಿತಾಧಿಕಾರಿಗಳು,
ಪರೀಕ್ಷಾ ಪೂರ್ವ ತರಬೇತಿ ಕೇಂದ್ರ,
ಬೆಂಗಳೂರು.